ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಸುತ್ತೋಲೆ

**ಪ್ರವೇಶ ಪರೀಕ್ಷೆ – 2025ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.**
**[ಯುಪಿಎಸ್‌ಸಿ / ಕೆಎಎಸ್ ಪರೀಕ್ಷೆಗಳಿಗೆ ತರಬೇತಿ ನೀಡಲು ಅಭ್ಯರ್ಥಿಗಳ ಆಯ್ಕೆ]**

**ವೇಳಾಪಟ್ಟಿ**

| ದಿನಾಂಕ : | ದಿನ : | ಸಮಯ : | ವಿಷಯ : | ಅಂಕಗಳು: |
|---|---|---|---|---|
| 31–05–2025 | ಶನಿವಾರ | ಮಧ್ಯಾಹ್ನ 02.30 ರಿಂದ 04.30 ರ ವರೆಗೆ | ಯುಪಿಎಸ್‌ಸಿ / ಕೆಎಎಸ್ | 100 |

## ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ. ಸಂ | ಬೆಲ್ ಸಂಖ್ಯೆ | ಮಧ್ಯಾಹ್ನದ ಅವಧಿ | ವಿವರಗಳು |
|---|---|---|---|
| 01 | ಮೊದಲನೇ ಬೆಲ್ | ಮ. 2.00 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದರೆ ಮಾತ್ರ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ. ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಹೆಸರನ್ನು ಬರೆಯಬೇಕು.<br>• ನಂತರ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಎಚ್ಚರದಿಂದ ನೊಂದಣಿ ಸಂಖ್ಯೆಯನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ತಪ್ಪದೇ ತುಂಬಬೇಕು. (ಮತ್ತೊಮ್ಮೆ ಪರಿಶೀಲಿಸುವುದು ಸೂಕ್ತ)<br>• ಅಭ್ಯರ್ಥಿಗಳು ತಾವು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಬರೆದಿರುವ ನೊಂದಣಿ ಸಂಖ್ಯೆಯನ್ನು, ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ನೊಂದಣಿ ಸಂಖ್ಯೆಗೆ ಅನುಗುಣವಾಗಿದೆಯೆ ಎಂದು ಪರಿಶೀಲಿಸಿಕೊಳ್ಳಬೇಕು. |
| 02 | ಎರಡನೇ ಬೆಲ್ | ಮ. 2.15 | • **ಮ.2.20** ಕ್ಕೆ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ".** ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ನಂತರ ಕೊಠಡಿ ಮೇಲ್ವಿಚಾರಕರು **ಮ. 2.25ಕ್ಕೆ** ಲಕೋಟೆಯನ್ನು ತೆರೆದು ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ **ವರ್ಷನ್ ಕೋಡ್** ಮತ್ತು ಕ್ರಮ ಸಂಖ್ಯೆಯನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿನ ನಿಗದಿತ ಜಾಗದಲ್ಲಿ ಬರೆದು ಅದಕ್ಕೆ ಸಂಬಂಧಿಸಿದ ವೃತ್ತಗಳನ್ನು ತುಂಬಬೇಕು. ನಂತರ ಅಭ್ಯರ್ಥಿಗಳು ಓಎಂಆರ್‌ನಲ್ಲಿ ನಿಗದಿತ ಜಾಗದಲ್ಲಿ ಸಹಿಯನ್ನು ಹಾಕುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ/ ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್‌ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಮ. 2.30 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರು ಪುಸ್ತಕವನ್ನು ತೆರೆದು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಈ ಬೆಲ್ ಅಂದರೆ **ಮ. 2.30** ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಮ. 3.30 | • ಇದು ಮೊದಲನೆಯ ಎಚ್ಚರಿಕೆ ಬೆಲ್ – **ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ** |
| 05 | ಐದನೇ ಬೆಲ್ | ಸಂ. 4.00 | • ಇದು ಎರಡನೆಯ ಎಚ್ಚರಿಕೆ ಬೆಲ್ – **ಪರೀಕ್ಷೆ ಮುಗಿಯಲು ಮೂವತ್ತು ನಿಮಿಷಗಳು ಬಾಕಿ ಉಳಿದಿರುವುದಕ್ಕಾಗಿ** |
| 06 | ಆರನೇ ಬೆಲ್ | ಮ. 4.25 | • ಇದು ಕೊನೆಯ ಎಚ್ಚರಿಕೆಯ ಬೆಲ್ ಕೊಠಡಿ ಮೇಲ್ವಿಚಾರಕರು **ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ** ಎಂದು ತಿಳಿಸುತ್ತಾರೆ. |
| 07 | ಏಳನೇ ಹಾಗೂ ಕೊನೆಯ ಬೆಲ್ | ಸಂ. 4.30 | • ಪರೀಕ್ಷೆ ಮುಕ್ತಾಯ.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>**ಮುಖ್ಯವಾದುದು:** ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕಚೇರಿ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯ ಜೊತೆಯಲ್ಲಿ ಹಿಂದಿರುಗಿಸಬೇಕು. |

ಸಹಿ/–
ಕಾರ್ಯನಿರ್ವಾಹಕ ನಿರ್ದೇಶಕರು

ಸೂಚನೆ: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್ ಉಪಕರಣಗಳು, ಕ್ಯಾಲುಕುಲೇಟರ್, ಮೊಬೈಲ್ ಫೋನ್, ಬ್ಲೂಟೂತ್, ವೈರ್‌ಲೆಸ್ ಸೆಟ್ಸ್ ಇತ್ಯಾದಿಗಳನ್ನು ತರುವುದನ್ನು ನಿಷೇದಿಸಲಾಗಿದೆ.

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**